ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

**2 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.**

**ಸಿ.ಸಿ.ನಂ.79/2023**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಗಂಗಪ್ಪ** | | |
| **ತಂದೆ:ಹೆಸರು** | **ಹನುಮಂತ** | **ಪಿಡಬ್ಲೂ:** | **09** |
| **ವಯಸ್ಸು** | **45 ವರ್ಷ** | **ಸಿಡಬ್ಲೂ:** | **10** |
| **ಉದ್ಯೋಗ:** | **ವ್ಯವಸಾಯ** | | |
| **ವಾಸ ಸ್ಥಳ:** | **ಸೋಮಲಾಪುರ.** | | |

**ದಿನಾಂಕ 28-01-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಮಾನ್ಯ ಸ ಸ ಅ ರವರಿಂದ**

ಈ ದಿನ ನ್ಯಾಯಾಲಯದಲ್ಲಿ 3 ಮತ್ತು 4 ನೇ ಆರೋಪಿಯು ಗೈರು ಹಾಜರಾಗಿದ್ದು, ಆರೋಪಿ ಪರ ವಕೀಲರು ಕಲಂ 317 ಸಿ.ಆರ್.ಪಿ.ಸಿ. ಅಡಿಯಲ್ಲಿ ಅರ್ಜಿಯನ್ನು ದಾಖಲಿಸಿ, ಗುರುತಿಸುವ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದಿದ್ದರಿಂದ, ಈ ಕೆಳಕಂಡಂತೆ ಸಾಕ್ಷಿಯ ವಿಚಾರಣೆ ತೆಗೆದುಕೊಳ್ಳಲಾಯಿತು.

ಸಾಕ್ಷಿಗೆ ನಿಪಿ-3 ಸ್ಥಳ ಪಂಚನಾಮೆಯನ್ನು ತೋರಿಸಲಾಗಿ, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-3ಬಿ ಎಂದು ಗುರುತಿಸಲಾಯಿತು.

ನಾನು ಅಂಬಾಮಠದ ಹತ್ತಿರ ಮೂರುವರೆ ವರ್ಷಗಳ ಹಿಂದೆ ಸಹಿ ಮಾಡಿದ್ದೆ. ಆಗ 4 ಗಂಟೆಯಾಗಿತ್ತು. 2 ರಿಂದ 3 ಕಲ್ಲುಗಳನ್ನು ಜಪ್ತುಪಡಿಸಿಕೊಂಡಿದ್ದರು. ಸದರಿ ಕಲ್ಲುಗಳನ್ನು ಹುಸೇನಪ್ಪ ತೋರಿಸಿದ್ದರು. ನಿಪಿ-3 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ. ಸಾಕ್ಷಿಯು ಫೋಟೋವನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃ: ಮಾನ್ಯ ಸ ಸ ಅ ರವರಿಂದಃ**

ದಿಃ 05.11.2022 ರಂದು ಮ.2 ರಿಂದ 3 ಗಂಟಯೆವರೆಗೆ ನಿಮ್ಮ & ಚಾಸಾ-9 ರವರ ಸಮಕ್ಷಮ ಘಟನಾ ಸ್ಥಳದಲ್ಲಿ ನಿಪಿ-3 ರಂತೆ ಸ್ಥಳ ಪಂಚನಾಮೆ ಮಾಡಿ, 3 ಹಿಡಿ ಗಾತ್ರದ ಕಲ್ಲುಗಳನ್ನು ವಶಕ್ಕೆ ಪಡೆದಿದ್ದರು ಎಂದರೆ ಸರಿ.

ನಿಪಿ-3 ರಲ್ಲಿರುವ ಸಂಗತಿಗಳ ಬಗ್ಗೆ ನಿಮಗೆ ಗೊತ್ತಿದೆ ಎಂದರೆ ಸರಿ. ಸಾಕ್ಷಿಗೆ ಮು.ಮಾ ಗಳನ್ನು ತೋರಿಸಿದ್ದು, ಸಾಕ್ಷಿಯು ಇವುಗಳನ್ನೇ ನನ್ನ ಸಮಕ್ಷಮ ವಶಪಡಿಸಿಕೊಂಡಿದ್ದರು ಎಂದು ನುಡಿದಿರುತ್ತಾರೆ.

**ಪಾಟೀಸವಾಲುಃ ಆರೋಪಿ ಪರ ವಕೀಲರಿಂದಃ**

1. ನನಗೆ ಓದಲು ಬರೆಯಲು ಬರುವುದಿಲ್ಲ, ಕೇವಲ ಸಹಿ ಮಾತ್ರ ಮಾಡುತ್ತೇನೆ. ಆ ದಿನ ನನ್ನನ್ನು ಯಾರೂ ಕರೆದಿರಲಿಲ್ಲ. ಪಂಚನಾಮೆಯಲ್ಲಿ ಬರೆದಿರುವ ವಿಷಯಗಳ ಬಗ್ಗೆ ನನಗೆ ಗೊತ್ತಿಲ್ಲ. ಪೋಲೀಸರು ಸಹಿ ಮಾಡು ಎಂದು ಹೇಳಿದ್ದರಿಂದ ಸಹಿ ಮಾಡಿದ್ದೆ.

2. ಪಂಚನಾಮೆಗೆ ನಿಮ್ಮನ್ನು ಕರೆದಿಲ್ಲ ಎಂದರೆ ಸಾಕ್ಷಿಯು ಬಾಯಿ ಮಾಡುತ್ತಿದ್ದರು, ನಾನು ಬಿಡಿಸಿದ್ದೆ ಎನ್ನುತ್ತಾರೆ. ಜಗಳದ ವಿಚಾರವಾಗಿ ನಾನು ಪೋಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ.

3. ಪೋಲೀಸರು ನಿಮ್ಮನ್ನು ಕರೆದಿಲ್ಲ, ನಿಮ್ಮ ಸಮಕ್ಷಮ ಪಂಚನಾಮೆ ಮಾಡಿಲ್ಲ & ಕಲ್ಲುಗಳನ್ನು ಜಪ್ತುಪಡಿಸಕೊಂಡಿಲ್ಲ, ಫೋಟೋವನ್ನು ತೆಗೆದಿಲ್ಲ ಎಂದರೆ ಸರಿಯಲ್ಲ. ನಿಮಗೆ ಈ ಘಟನೆಯ ಬಗ್ಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿಯಲ್ಲ.

4. ಅಂಬಾಮಠದ ಹತ್ತಿರ ಕಂಕರ್ ಮಿಷನ್‌ನಿಂದ ಕಲ್ಲು ಹೊಡೆಯುತ್ತಾರೆ ಎಂದರೆ ಸರಿ. ಮು ಮಾ ಗಳು ಸದರಿ ಕಂಕರ್ ಮಿಷನ್‌ನಿಂದ ಹೊಡೆದ ಕಲ್ಲುಗಳು ಎಂದರೆ ಸರಿಯಲ್ಲ. ನೀವು ಹೇಳಿದ ಕಲ್ಲುಗಳು ಇವು ಅಲ್ಲ ಎಂದರೆ ಸರಿಯಲ್ಲ. ಫೋಟೋವನ್ನು ಪೋಲೀಸರು ಮೊಬೈಲ್‌ನಿಂದ ತೆಗೆದಿದ್ದರು. ಆ ಫೋಟೋ ತೆಗೆದ ಪೋಲೀಸರ ಹೆಸರು ಹೇಳಲು ಆಗುವುದಿಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)

**ಓ ಹೇ ಕೇ ಸ ಇದೆ.**

**C/c 2 ನೇ ಅಪರ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆ.ಎಂ.ಎಫ್.ಸಿ., ಸಿಂಧನೂರು.**